# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 619 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಶರಣಗೌಡ ಬಯ್ಯಾಪುರ |
| ಉತ್ತರಿಸುವ ದಿನಾಂಕ | : | 13-12-2024 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ವಸತಿ ನಿಲಯಗಳಲ್ಲಿ ಖಾಲಿ ಇರುವ ಮೇಲ್ವಿಚಾರಕರ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವ ಹಂತದಲ್ಲಿದೆ; (ವಿವರ ನೀಡುವುದು)</td><td>ಹೌದು.<br><br>ಸಮಾಜ ಕಲ್ಯಾಣ ಇಲಾಖೆಯು ರಾಜ್ಯ ವ್ಯಾಪಿ ನಿಯಂತ್ರಣ ಹೊಂದಿದ್ದು, ಗ್ರೂಪ್ ಸಿ ವೃಂದಕ್ಕೆ ಆಯುಕ್ತರು ನೇಮಕಾತಿ ಪ್ರಾಧಿಕಾರಿಯಾಗಿರುತ್ತಾರೆ. ಆದುದರಿಂದ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿನ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಪರಿಗಣನೆಗೆ ತೆಗೆದುಕೊಂಡು ಭರ್ತಿ ಮಾಡಲಾಗಿರುತ್ತದೆ.<br><br>ಅದರಂತೆ ಸಮಾಜ ಕಲ್ಯಾಣ ಇಲಾಖೆಯಲ್ಲಿ ವಿದ್ಯಾರ್ಥಿನಿಲಯಗಳಲ್ಲಿನ ಗ್ರೂಪ್ ಸಿ ವೃಂದದ ಉಳಿಕೆ ಮೂಲ ವೃಂದದಲ್ಲಿ ಖಾಲಿ ಇದ್ದ 232 ವಾರ್ಡನ್(ಪುರುಷ) ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಸಲುವಾಗಿ ಆರ್ಥಿಕ ಇಲಾಖೆಯ ಸಹಮತಿ ಕೋರಿ ದಿನಾಂಕ:23-08-2023 ರಲ್ಲಿ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.<br><br>ಆರ್ಥಿಕ ಇಲಾಖೆಯ ಟಿಪ್ಪಣಿ ದಿನಾಂಕ:15-10-2024 ರಲ್ಲಿ ಸಮಾಜ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದದ 210 ವಾರ್ಡನ್ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆಯಲು ಸಹಮತಿ ನೀಡಲಾಗಿರುತ್ತದೆ. ಈ ಹಿನ್ನಲೆಯಲ್ಲಿ ಸದರಿ ವಾರ್ಡನ್ ಹುದ್ದೆಗಳನ್ನು ಹೊರಗುತ್ತಿಗೆ ಬದಲಾಗಿ ಖಾಯಂ ವಾರ್ಡನ್ ಭರ್ತಿಗೆ ಅನುಮತಿ ನೀಡುವಂತೆ ಆರ್ಥಿಕ ಇಲಾಖೆಗೆ ಮತ್ತೊಮ್ಮೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.<br><br>ಸಮಾಜ ಕಲ್ಯಾಣ ಇಲಾಖೆಯಲ್ಲಿನ ವಾರ್ಡನ್ ವೃಂದದ ಖಾಲಿ ಹುದ್ದೆಗಳ ಮಾಹಿತಿ ಈ ಕೆಳಕಂಡಂತಿದೆ.<br><br><table><tr><th>ಹುದ್ದೆ</th><th>ನೇರ ನೇಮಕಾತಿ</th><th>ಮುಂಬಡ್ತಿ</th><th>ಒಟ್ಟು</th></tr><tr><td>ವಾರ್ಡನ್ (ಪುರುಷ)</td><td>282</td><td>192</td><td>474</td></tr><tr><td>ವಾರ್ಡನ್ (ಮಹಿಳೆ)</td><td>21</td><td>62</td><td>83</td></tr><tr><td>ಒಟ್ಟು</td><td>303</td><td>254</td><td>557</td></tr></table></td></tr>
</table>

| | | |
|---|---|---|
| ಆ) | ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳಿಗೆ ಸಂಬಂಧಿಸಿದಂತೆ ವಸತಿ ನಿಲಯಗಳಿಗೆ ಆಹಾರ ದಾಸ್ತಾನು ಸಾಮಾಗ್ರಿಗಳ ಸರಬರಾಜು, ಟೆಂಡರ್ ಪ್ರಕ್ರಿಯೆ ನಿಗಧಿತ ಸಮಯಕ್ಕೆ ಆಗದೆ ಇರುವುದರಿಂದ ಮಕ್ಕಳು ಮತ್ತು ಮೇಲ್ವಿಚಾರಕರು ತೊಂದರೆ ಅನುಭವಸುತ್ತಿರುವ ಅಂಶವು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರವು ಈ ಬಗ್ಗೆ ಯಾವ ಕ್ರಮ ತೆಗೆದುಕೊಂಡಿದೆ? (ಮಾಹಿತಿ ಒದಗಿಸುವುದು) | ಬಂದಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ: ಸಕಇ 97 ಪಕವಿ 2023. ದಿನಾಂಕ: 28-07-2023 ರಲ್ಲಿ ಸಮಾಜ ಕಲ್ಯಾಣ ಇಲಾಖೆಯ ಡಾ|| ಬಿ.ಆರ್.ಅಂಬೇಡ್ಕರ್ ವಸತಿ ಶಾಲೆ, ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಆಹಾರ ಪದಾರ್ಥಗಳನ್ನು ಸರಬರಾಜು ಮಾಡಲು ಮಾರ್ಗಸೂಚಿಗಳೊಂದಿಗೆ ಆದೇಶ ಹೊರಡಿಸಲಾಗಿದ್ದು, ಕಾಲ ಕಾಲಕ್ಕೆ ಟೆಂಡರ್ ಕರೆಯಲು ಹಾಗೂ ವೇಳಾಪಟ್ಟಿಯನ್ನು (Calender of events) ನೀಡಲಾಗಿರುತ್ತದೆ.<br><br>ಮುಂದುವರೆದು, ದಿನಾಂಕ:14-03-2024 ರ ಆದೇಶದಲ್ಲಿ 2024-25 ನೇ ಸಾಲಿನಿಂದ ಜಿಲ್ಲಾ ಮಟ್ಟದಲ್ಲಿ ಎರಡು ವರ್ಷಗಳ ಅವಧಿಗೆ ಜಿಲ್ಲಾವಾರು ಆಹಾರ ಸರಬರಾಜು ಮಾಡಲು ಆದೇಶಿಸಲಾಗಿರುತ್ತದೆ ಹಾಗೂ ಸರ್ಕಾರದ ಆದೇಶ ಸಂಖ್ಯೆ:ಸಕಇ 738 ಪಕವಿ 2024, ಬೆಂಗಳೂರು ದಿನಾಂಕ:30-10-2024 ರಲ್ಲಿ ಸರ್ಕಾರವು ಮತ್ತೊಮ್ಮೆ ಪರಿಷ್ಕರಿಸಿ ಮಾರ್ಗಸೂಚಿಗಳೊಂದಿಗೆ ಆದೇಶವನ್ನು ಹೊರಡಿಸಿರುತ್ತದೆ. |

**ಸಕಇ 882 ಪಕವಿ 2024**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**